All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

15.05.2025 19.35 P.M.

**<><><><>**

ಮುಖ್ಯಾಂಶಗಳು

- ಭಾರತ-ಪಾಕಿಸ್ತಾನ ನಡುವೆ ಯಾವುದೇ ೩ನೇ ದೇಶದ ಮಧ್ಯಸ್ಥಿಕೆ ಒಪ್ಪಲ್ಲ - ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
- ಪಾಕಿಸ್ತಾನದ ಪರಮಾಣು ಶಸ್ತ್ರಾಸ್ತ್ರಗಳನ್ನು ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆಯ ಮೇಲ್ವಿಚಾರಣೆಗೆ ವಹಿಸಬೇಕು - ರಕ್ಷಣಾ ಸಚಿವ ರಾಜನಾಥ್ ಸಿಂಗ್ ಆಗ್ರಹ
- ವಕ್ಫ್ ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಅರ್ಜಿ ; ಸುಪ್ರೀಂಕೋರ್ಟ್‌ನಲ್ಲಿ ಇದೇ ೨೦ರಂದು ವಿಚಾರಣೆ
- ಜಮ್ಮು-ಕಾಶ್ಮೀರದಲ್ಲಿ ಉಗ್ರ ಕಾರ್ಯಾಚರಣೆ ; ಮೂವರು ಭಯೋತ್ಪಾದಕರ ಸಾವು

<><><><>

ಭಾರತ ಮತ್ತು ಪಾಕಿಸ್ತಾನ ನಡುವೆ ಯಾವುದೇ ೩ನೇ ದೇಶದ ಮಧ್ಯಸ್ಥಿಕೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ತಳ್ಳಿ ಹಾಕಿದ್ದಾರೆ. ನವದೆಹಲಿಯಲ್ಲಿಂದು ನಡೆದ ಕಾರ್ಯಕ್ರಮವೊಂದರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನದೊಂದಗಿನ ವ್ಯವಹಾರಗಳು ದ್ವಿಪಕ್ಷೀಯವಾಗಿರುತ್ತದೆ ಎಂದು ಪುನರುಚ್ಚರಿಸಿದರು.

ಅಕ್ರಮವಾಗಿ ಪಾಕಿಸ್ತಾನ ಆಕ್ರಮಿಸಿಕೊಂಡಿರುವ ಪಾಕ್ ಆಕ್ರಮಿತ ಕಾಶ್ಮೀರವನ್ನು ತೆರವುಗೊಳಿಸುವ ವಿಷಯದ ಬಗ್ಗೆ ಮಾತ್ರ ನಾವು ಆ ದೇಶದೊಂದಿಗೆ ಚರ್ಚಿಸಬೇಕಾದ ಏಕೈಕ ವಿಷಯವಾಗಿದೆ. ಭಾರತದ ಈ ನಿಲುವಿನಲ್ಲಿ ಯಾವುದೇ ಬದಲಾವಣೆಯಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪದಾನೆಯನ್ನು ನಿಲ್ಲಿಸುವವರೆಗೂ ಸಿಂಧೂ ಜಲ ಒಪ್ಪಂದದ ಮೇಲಿನ ನಿರ್ಬಂಧ ಮುಂದುವರೆಯಲಿದೆ ಎಂದು ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದರು.

ಧ್ವನಿ : ಡಾ. ಎಸ್. ಜೈಶಂಕರ್ (೨೨ ಸೆಕೆಂಡ್‌ಗಳು)

ಭಾರತ-ಅಮೆರಿಕ ವ್ಯಾಪಾರದ ಕುರಿತು ಮಾತನಾಡಿದ ಅವರು, ಉಭಯ ದೇಶಗಳ ನಡುವೆ ಮಾತುಕತೆ ಪ್ರಗತಿಯಲ್ಲಿದೆ. ಯಾವುದೇ ವ್ಯಾಪಾರ ಒಪ್ಪಂದವು ಎರಡು ದೇಶಗಳಿಗೆ ಪರಸ್ಪರ ಪ್ರಯೋಜನಕಾರಿಯಾಗಿರಬೇಕು ಎಂದು ಹೇಳಿದರು.

<><><><>

ಮೀನುಗಾರಿಕೆ ಕ್ಷೇತ್ರದ ಪ್ರಗತಿ ಮತ್ತು ಯೋಜನೆಗಳ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಿದ್ದರು. ದೆಹಲಿಯಲ್ಲಿಂದು ನಡೆದ ಈ ಸಭೆಯು ಆಳ ಸಮುದ್ರ ಮೀನುಗಾರಿಕೆ ಮತ್ತು ಸಮುದ್ರಾಹಾರ ರಫ್ತಿನ ಮೇಲೆ ಕೇಂದ್ರೀಕರಿಸಿತು. ಕೇಂದ್ರ ಮೀನುಗಾರಿಕೆ ಸಚಿವ ರಾಜೀವ್ ರಂಜನ್ ಸಿಂಗ್ ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

<><><><>

ಕಳೆದ ಹಲವು ದಶಕಗಳಿಂದ ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರದಿಂದ ರಫ್ತು ಮಾಡಲಾಗುತ್ತಿರುವ ಭಯೋತ್ಪಾದನೆಗೆ 'ಆಪರೇಷನ್ ಸಿಂದೂರ' ಭಾರತದ ಅಜೇಯ ಮತ್ತು ಬಲವಾದ ಪ್ರತಿಕ್ರಿಯೆಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರತಿಪಾದಿಸಿದ್ದಾರೆ. ಶ್ರೀನಗರದಲ್ಲಿರುವ ಭಾರತೀಯ ಸೇನೆಯ ಬಾದಾಮಿ ಬಾಗ್ ೧೫ ಕಾರ್ಪ್ಸ್ ಪ್ರಧಾನ ಕಚೇರಿಯಲ್ಲಿ ಸೈನಿಕರನ್ನು ಉದ್ದೇಶಿಸಿ

ಮಾತನಾಡಿದ ಸಚಿವರು, ಮಾತೃಭೂಮಿಯನ್ನು ರಕ್ಷಿಸುವಲ್ಲಿ ಸಶಸ್ತ್ರ ಪಡೆಗಳ ಧೈರ್ಯ, ಬದ್ಧತೆ ಮತ್ತು ದೃಢ ಸಂಕಲ್ಪಕ್ಕಾಗಿ ದೇಶವು ಹೆಮ್ಮೆ ಪಡುತ್ತಿದೆ ಎಂದು ಹೇಳಿದರು. ಆಪರೇಷನ್ ಸಿಂದೂರ ಹಿನ್ನೆಲೆಯಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಶೌರ್ಯವನ್ನು ಶ್ಲಾಘಿಸಿದ ಅವರು, ಪಾಕಿಸ್ತಾನವು ಭಾರತದೊಂದಿಗೆ ಎಷ್ಟು ಬೇಜವಾಬ್ದಾರಿಯುತವಾಗಿ ವರ್ತಿಸಿದೆ ಎಂಬುದನ್ನು ಇಡೀ ಜಗತ್ತು ನೋಡಿದೆ ಎಂದರು. ಪಾಕಿಸ್ತಾನದ ತೆಕ್ಕೆಯಲ್ಲಿರುವ ಪರಮಾಣು ಶಸ್ತ್ರಾಸ್ತ್ರಗಳ ಸುರಕ್ಷತೆಯನ್ನು ಪ್ರಶ್ನಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪಾಕಿಸ್ತಾನದ ಪರಮಾಣು ಶಸ್ತ್ರಾಸ್ತ್ರಗಳನ್ನು ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆಯ ಮೇಲ್ವಿಚಾರಣೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದರು.

ಧ್ವನಿ : ರಾಜನಾಥ್ ಸಿಂಗ್ (೨೬ ಸೆಕೆಂಡ್‌ಗಳು)

ಆಪರೇಷನ್ ಸಿಂದೂರ ನಂತರ ಜಮ್ಮು-ಕಾಶ್ಮೀರಕ್ಕೆ ಸಚಿವ ರಾಜನಾಥ್ ಸಿಂಗ್ ಅವರ ಮೊದಲ ಭೇಟಿ ಇದಾಗಿದೆ.

ಈ ವೇಳೆ ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಭಾರತೀಯ ಸೇನಾ ಸಿಬ್ಬಂದಿ ಮುಖ್ಯಸ್ಥ ಉಪೇಂದ್ರ ದ್ವಿವೇದಿ ಸೇರಿದಂತೆ ಸೇನೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><><>

೨೦೨೫ರ ವಕ್ಫ್ ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಮೇ ೨೦ರಂದು ಕೈಗೆತ್ತಿಕೊಳ್ಳುವುದಾಗಿ ಸುಪ್ರೀಂಕೋರ್ಟ್ ಇಂದು ತಿಳಿಸಿದೆ. ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯ್ ಮತ್ತು ನ್ಯಾಯಮೂರ್ತಿ ಆಗಸ್ಟೀನ್ ಜಾರ್ಜ್ ಮಸೀಹ್ ಅವರನ್ನೊಳಗೊಂಡ ನ್ಯಾಯಪೀಠವು, ೨೦೨೫ರ ವಕ್ಫ್ ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿದಾರರ ಪರವಾಗಿ ಹಾಜರಾದ ಹಿರಿಯ ನ್ಯಾಯವಾದಿ ಕಪಿಲ್ ಸಿಬಾಲ್ ಮತ್ತು ಕೇಂದ್ರ ಸರ್ಕಾರವನ್ನು ಪ್ರತಿನಿಧಿಸುವ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರಿಗೆ ಈ ಸಂಬಂಧ ಮೇ ೧೯ರೊಳಗೆ ಲಿಖಿತ ಪ್ರತಿಕ್ರಿಯೆ ಸಲ್ಲಿಸುವಂತೆ ಸೂಚಿಸಿದೆ. ಮುಂದಿನ ವಿಚಾರಣೆ ವೇಳೆ ಹಿಂದಿನ ೧೯೯೫ರ ವಕ್ಫ್ ಕಾನೂನಿನ ನಿಬಂಧನೆಗಳನ್ನು ತಡೆ ಕೋರಿ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ನ್ಯಾಯಪೀಠ ಹೇಳಿದೆ. ಏಪ್ರಿಲ್ ೨೫ರಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯವು ೨೦೨೫ರ ವಕ್ಫ್ ತಿದ್ದುಪಡಿ ಕಾಯ್ದೆ ಸಮರ್ಥಿಸಿಕೊಂಡು ಪ್ರಾಥಮಿಕ ಅಫಿಡವಿಟ್ ಸಲ್ಲಿಸಿದೆ.

<><><>

ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯ ಅವಂತಿಪೋರಾದಲ್ಲಿ ಇಂದು ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ಭಯೋತ್ಪಾದಕರು ಹತರಾಗಿದ್ದಾರೆ. ಅವಂತಿಪೋರಾದ ನಾಡರ್ ಟ್ರಾಲ್ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ನಿರ್ದಿಷ್ಟ ಮಾಹಿತಿಯ ನಂತರ ಭಾರತೀಯ ಸೇನೆ, ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮತ್ತು ಸಿಆರ್‌ಪಿಎಫ್ ಜಂಟಿ ಪಡೆಯಿಂದ ಇಂದು ಬೆಳಗ್ಗೆ ಶೋಧ ಕಾರ್ಯಾಚರಣೆ ಪ್ರಾರಂಭಿಸಲಾಯಿತು. ಜಂಟಿ ಪಡೆ ಶಂಕಿತ ಸ್ಥಳವನ್ನು ತಲುಪುತ್ತಿದ್ದಂತೆ, ಅಡಗಿಕೊಂಡಿದ್ದ ಭಯೋತ್ಪಾದಕರು, ಸಶಸ್ತ್ರ ಪಡೆಗಳ ಮೇಲೆ ಮನಬಂದಂತೆ ಗುಂಡು ಹಾರಿಸಿದರು. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಗಳು ಗುಂಡಿನ ದಾಳಿ ನಡೆಸಿದರು. ಕಾರ್ಯಾಚರಣೆಯಲ್ಲಿ ಹತರಾದ ಮೂವರು ಶಸ್ತ್ರಸಜ್ಜಿತ ಭಯೋತ್ಪಾದಕರ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಕಾಶ್ಮೀರ ಐಜಿಪಿ ವಿ.ಕೆ.ಬರ್ಡಿ ತಿಳಿಸಿದ್ದಾರೆ.

<><><>

ಕಳೆದ ಮೂರು ದಶಕಗಳಲ್ಲಿ ಭಾರತ ಮತ್ತು ಹೊಂಡೂರಾಸ್ ನಡುವಿನ ಆರ್ಥಿಕ ಸಂಬಂಧಗಳು ಸ್ಥಿರವಾಗಿ ಬೆಳೆದಿದ್ದು, ದ್ವಿಪಕ್ಷೀಯ ವ್ಯಾಪಾರವು ೩೦೦ ದಶಲಕ್ಷ ಡಾಲರ್‌ಗಳಷ್ಟು ತಲುಪಿದೆ ಎಂದು

ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಹೊಂಡೂರಾಸ್ ರಾಯಭಾರ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಪೆಹಲ್ಗಾಮ್ ಭಯೋತ್ಪಾದಕ ದಾಳಿ ಖಂಡಿಸಿ ಭಾರತವನ್ನು ಬೆಂಬಲಿಸಿದಕ್ಕಾಗಿ ಹೊಂಡೂರಾಸ್‌ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಭಾರತ ಮತ್ತು ಹೊಂಡೂರಾಸ್ ನಡುವಿನ ಆರ್ಥಿಕ ಸಂಬಂಧಗಳು ವ್ಯಾಪಾರ, ಹೂಡಿಕೆ ಮತ್ತು ತಾಂತ್ರಿಕ ಸಹಕಾರದಿಂದ ಕೂಡಿದೆ. ಔಷಧಗಳು, ಜವಳಿ, ಆಟೋಮೊಬೈಲ್, ಯಂತ್ರೋಪಕರಣಗಳು, ಕಾಫಿ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಉಭಯ ದೇಶಗಳು ವಾಣಿಜ್ಯ ವಿನಿಮಯ ಹೊಂದಿವೆ ಎಂದು ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

<><><><>

ನಿವೃತ್ತ ಐಎಎಸ್ ಅಧಿಕಾರಿ ಮತ್ತು ಮಾಜಿ ರಕ್ಷಣಾ ಕಾರ್ಯದರ್ಶಿ ಡಾ. ಅಜಯ್ ಕುಮಾರ್ ಇಂದು ಕೇಂದ್ರ ಲೋಕ ಸೇವಾ ಆಯೋಗದ ನೂತನ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಆಯೋಗದ ಹಿರಿಯ ಸದಸ್ಯರಾದ ನಿವೃತ್ತ ಲೆಫ್ಟಿನೆಂಟ್ ಜನರಲ್ ರಾಜ್ ಶುಕ್ಲ, ಯುಪಿಎಸ್‌ಸಿ ನೂತನ ಅಧ್ಯಕ್ಷರಿಗೆ ಪ್ರಮಾಣ ವಚನ ಬೋಧಿಸಿದರು. ಕೇರಳ ಕೇಡರ್‌ನ ನಿವೃತ್ತ ಐಎಎಸ್ ಅಧಿಕಾರಿಯಾಗಿರುವ ಡಾ. ಅಜಯ್ ಕುಮಾರ್ ೨೦೧೯ರ ಆಗಸ್ಟ್‌ನಿಂದ ೨೦೨೨ರ ಅಕ್ಟೋಬರ್‌ವರೆಗೆ ರಕ್ಷಣಾ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸಿದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನಿನ್ನೆ ಯುಪಿಎಸ್‌ಸಿ ಅಧ್ಯಕ್ಷರಾಗಿ ಡಾ. ಅಜಯ್ ಕುಮಾರ್ ಅವರನ್ನು ನೇಮಿಸಿದರು.

<><><><>

ಪಂಜಾಬ್‌ನ ಅಮೃತಸರ ಕಳ್ಳಭಟ್ಟಿ ದುರಂತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೨೭ ಕ್ಕೆ ಏರಿಕೆಯಾಗಿದೆ. ಏತನ್ಮಧ್ಯೆ, ದೆಹಲಿ ಮೂಲದ ಕಾರ್ಖಾನೆ ಮಾಲೀಕರಾದ ತಂದೆ ಮತ್ತು ಮಗನನ್ನು ಅಮೃತಸರ ಪೊಲೀಸರು ಬಂಧಿಸಿದ್ದಾರೆ. ಅವರು ತಮ್ಮ ಕಾರ್ಖಾನೆಯಿಂದ ಆನ್‌ಲೈನ್‌ನಲ್ಲಿ ಮೆಥನಾಲ್ ಮಾರಾಟ ಮಾಡಿದ್ದರು.  ಇಬ್ಬರನ್ನು ಸ್ಥಳೀಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ನ್ಯಾಯಾಲಯವು ಅವರನ್ನು ಐದು ದಿನಗಳ ಕಾಲ ಪೊಲೀಸ್ ವಶಕ್ಕೆ ಒಪ್ಪಿಸಿದೆ ಎಂದು ಪೊಲೀಸ್ ಉಪವರಿಷ್ಠಾಧಿಕಾರಿ ಮಣೀಂದರ್ ಸಿಂಗ್ ತಿಳಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಈ ಹಿಂದೆ ೧೮ ಜನರನ್ನು ಬಂಧಿಸಲಾಗಿತ್ತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>